ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಸಮಾಜ ಕಲ್ಯಾಣ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ    ದಿನಾಂಕ : DATE : 3/7/2020

### ಪರಿಶಿಷ್ಟ ಜಾತಿಗೆ ಶೇ.17, ಪಂಗಡಕ್ಕೆ ಶೇ.7ರವರೆಗೆ ಹೆಚ್ಚಿಸಬಹುದು

# ಎಸ್‌ಸಿ, ಎಸ್ಟಿ ಮೀಸಲು ಹೆಚ್ಚಳಕ್ಕೆ ಶಿಫಾರಸು

ಉ.ವಾ 3/7/20

**ಬೆಂಗಳೂರು:** ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಶೈಕ್ಷಣಿಕ ಮತ್ತು ಉದ್ಯೋಗ ಮೀಸಲಾತಿಯನ್ನು ಕ್ರಮವಾಗಿ ಶೇ.17 ಮತ್ತು ಶೇ.7ಕ್ಕೆ ಹೆಚ್ಚಳ ಮಾಡಬಹುದು ಎಂದು ನಿವೃತ್ತ ನ್ಯಾ. ನಾಗಮೋಹನ್‌ದಾಸ್ ಅವರ ನೇತೃತ್ವದ ಆಯೋಗ ಶಿಫಾರಸು ಮಾಡಿದೆ.

ಪರಿಶಿಷ್ಟ ಜಾತಿಯವರಿಗೆ ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ಪ್ರಮಾಣವನ್ನು ಶೇ.2 ಹಾಗೂ ಪರಿಶಿಷ್ಟ ಪಂಗಡದ ಮೀಸಲಾತಿ ಪ್ರಮಾಣವನ್ನು ಶೇ.4ರಷ್ಟು ಹೆಚ್ಚಳ ಮಾಡಬಹುದೇ ಎಂಬ ಬಗ್ಗೆ ಪರಿಶೀಲಿಸಿ ವರದಿ ಸಲ್ಲಿಸಲು ರಾಜ್ಯ ಸರ್ಕಾರ ಆಯೋಗ ರಚಿಸಿತ್ತು.

ನಿವೃತ್ತ ನ್ಯಾ. ನಾಗಮೋಹನ್ ದಾಸ್ ಅವರು ಗುರುವಾರ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ವರದಿ ನೀಡಿದರು.

ಕಾಲಮಿತಿಯಲ್ಲಿ ವರದಿ ಸಲ್ಲಿಸಿದ್ದಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದ ಯಡಿಯೂರಪ್ಪ ಅವರು ವರದಿ ಪರಿಶೀಲಿಸಿ ಸಚಿವ ಸಂಪುಟದಲ್ಲಿ ಚರ್ಚಿಸಿ ಮುಂದಿನ ತೀರ್ಮಾನ ಕೈಗೊಳ್ಳುವುದಾಗಿ ಹೇಳಿದ್ದಾರೆ ಎಂದು ಹೇಳಲಾಗಿದೆ.

ಅಂದ ಹಾಗೆ ಮೀಸಲಾತಿ ಹೆಚ್ಚಳ ಸಂಬಂಧ ಈ ಆಯೋಗವನ್ನು ಹಿಂದಿನ ಸರ್ಕಾರದಲ್ಲೇ ರಚಿಸಲಾಗಿತ್ತು. ಬಿಎಸ್‌ವೈ ಸರ್ಕಾರ ಬಂದ ಮೇಲೆ ಆಯೋಗದ ಅವಧಿಯನ್ನು ವಿಸ್ತರಣೆ ಮಾಡಿ, ಜೂ.30ರೊಳಗೆ ವರದಿ ನೀಡುವಂತೆ ತಿಳಿಸಿತ್ತು.



ನಾನು ಗ್ರಾಮಾಂತರ ಪ್ರದೇಶದಲ್ಲಿ ಹುಟ್ಟಿ ಬೆಳೆದವನು. ತಳ ಸಮುದಾಯದವರ ಬದುಕು, ಕಷ್ಟ ಗೊತ್ತು. ಆದರೆ ಅವರಿಂದಲೇ ಅದನ್ನು ಕೇಳಿದ್ದು ವಿಶೇಷ ಅನುಭವ ನೀಡಿತು.

• ನ್ಯಾ. ನಾಗಮೋಹನ್ ದಾಸ್, ನಿವೃತ್ತ ನ್ಯಾಯಮೂರ್ತಿ

ಸದ್ಯ ಪರಿಶಿಷ್ಟ ಜಾತಿಗೆ ಶೇ.15 ಹಾಗೂ ಪರಿಶಿಷ್ಟ ಪಂಗಡಕ್ಕೆ ಶೇ.3ರಷ್ಟು ಶೈಕ್ಷಣಿಕ ಮತ್ತು ಉದ್ಯೋಗ ಮೀಸಲಾತಿ ಇದೆ. ಆಯೋಗವು 2011ರ ಜನಗಣತಿ ಜತೆಗೆ 2021ಕ್ಕೆ ನಡೆಯುವ ಗಣತಿಯನ್ನು ಗಮನದಲ್ಲಿಟ್ಟುಕೊಂಡು ಪರಿಶಿಷ್ಟ ಜಾತಿ, ಪಂಗಡದವರ ಸಾಮಾಜಿಕ, ಆರ್ಥಿಕ, ಶೈಕ್ಷಣಿಕ ಸ್ಥಿತಿಗತಿಯನ್ನೂ ಪರಿಶೀಲಿಸಿ, ಸಂಬಂಧಪಟ್ಟವರೊಂದಿಗೆ ಸಮಾಲೋಚನೆ ನಡೆಸಿ ವರದಿ ನೀಡಿದೆ.

**ಒಳಮೀಸಲಾತಿ ಕಲ್ಪಿಸಿ:** ಹಾಗೆಯೇ ಅಲೆಮಾರಿಗಳು, ಅರೆ ಅಲೆಮಾರಿಗಳು, ಅರಣ್ಯವಾಸಿಗಳು, ಬುಡಕಟ್ಟು ಜನರ ಅಭಿವೃದ್ಧಿಗೆ ಪ್ರತ್ಯೇಕ ಆಯೋಗ ಸ್ಥಾಪನೆಯಾಗಬೇಕು. ಒಳಮೀಸಲಾತಿ ಕಲ್ಪಿಸುವುದು ಅಗತ್ಯವಾಗಿದೆ. ಆದರೆ ಆಳ ಅಧ್ಯಯನದ ಜತೆಗೆ ವೈಜ್ಞಾನಿಕವಾಗಿ ಜಾತಿ ಗಣತಿ ನಡೆಯಬೇಕು.

➘ 5ನೇ ಪುಟಕ್ಕೆ

### ಶೇ.50 ಮೀರಲು ಶಿಫಾರಸು?

**ಒಟ್ಟಾರೆ ಮೀಸಲಾತಿ ಪ್ರಮಾಣ ಶೇ.50 ಮೀರಬಾರದು ಎಂಬುದಾಗಿ ಸುಪ್ರೀಂ ಕೋರ್ಟ್ ಆದೇಶವಿದೆ. ಆದರೂ ಮೀಸಲಾತಿ ಅಂಶವನ್ನು ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸಿ ಮೀಸಲಾತಿ ಪ್ರಮಾಣಕ್ಕೆ ಹೆಚ್ಚಳಕ್ಕೆ ಅವಕಾಶವಿದ್ದು, ಈ ಬಗ್ಗೆ ಸರ್ಕಾರ ಪರಿಶೀಲಿಸಬಹುದು ಎಂದು ಶಿಫಾರಸು ಮಾಡಲಾಗಿದೆ ಎಂದು ಹೇಳಲಾಗಿದೆ.**

## ಎಸ್‌ಸಿ, ಎಸ್ಟಿ ಮೀಸಲು ಹೆಚ್ಚಳಕ್ಕೆ ಶಿಫಾರಸು

ಉ.ವಾ 3/7/20

**1ನೇ ಪುಟದಿಂದ ▸** ಈ ಅಂಶಗಳ ಆಧಾರದ ಮೇಲೆ ಒಳಮೀಸಲಾತಿ ಸೌಲಭ್ಯ ಕಲ್ಪಿಸಬಹುದು ಎಂಬುದಾಗಿಯೂ ಶಿಫಾರಸಿನಲ್ಲಿದೆ ಎಂದು ತಿಳಿದುಬಂದಿದೆ. ಆಶ್ರಮ ಶಾಲೆಗಳಿಗೂ ಎಸ್‌ಸಿಪಿ- ಟಿಎಸ್‌ಪಿ ಅನುದಾನ ನೀಡಬೇಕು. ಕಾರ್ಯಾಂಗದಲ್ಲಿ ಪರಿಶಿಷ್ಟ ಜಾತಿ, ಪಂಗಡದವರ ಪ್ರಾತಿನಿಧ್ಯ ಕಡಿಮೆ ಇದೆ. ಕೇವಲ 'ಡಿ' ದರ್ಜೆ ನೌಕರಿಯಷ್ಟೇ ಭರ್ತಿಯಾಗುತ್ತಿದ್ದು 'ಎ' ಮತ್ತು 'ಬಿ' ದರ್ಜೆ ಹುದ್ದೆಗಳ ಭರ್ತಿ ಪ್ರಕ್ರಿಯೆ ಸಮರ್ಪಕವಾಗಿ ನಡೆಯುತ್ತಿಲ್ಲ. ಖಾಲಿಯಿರುವ ಎಲ್ಲ ಹುದ್ದೆಗಳು, ಬ್ಯಾಕ್‌ಲಾಗ್ ಹುದ್ದೆಗಳು, ಬಡ್ತಿಯನ್ನು ಸಕಾಲದಲ್ಲಿ ನೀಡಬೇಕು ಎಂದು ಶಿಫಾರಸ್ಸಿನಲ್ಲಿ ಉಲ್ಲೇಖಿಸಲಾಗಿದೆ ಎನ್ನಲಾಗಿದೆ.

**ಸಂವಿಧಾನದ ಆಶಯಕ್ಕೆ ಪೂರಕವಾಗಿ ವರದಿ:** ಆಯೋಗಕ್ಕೆ ಒಟ್ಟು 852 ಲಿಖಿತ ಮನವಿ ಸಲ್ಲಿಕೆಯಾಗಿದ್ದು 42 ಸಮಾಲೋಚನಾ ಸಭೆ ನಡೆಸಲಾಗಿದೆ. ರಾಜಕೀಯ ಪಕ್ಷಗಳು, ನಾನಾ ಸಂಘ ಸಂಸ್ಥೆಗಳು, ತಜ್ಞರು, ಸ್ವಯಂ ಸೇವಾ ಸಂಸ್ಥೆಗಳು, ಸ್ವಾಮೀಜಿಗಳು, ಕಾನೂನು ತಜ್ಞರೊಂದಿಗೆ ಸಮಾಲೋಚನೆ ನಡೆಸಲಾಗಿದೆ. ಎಲ್ಲ ಸರ್ಕಾರಿ ಇಲಾಖೆಯಿಂದ ಮಾಹಿತಿ ಸಂಗ್ರಹಿಸಲಾಗಿದೆ. ಅವುಗಳನ್ನೆಲ್ಲಾ ವಿಶ್ಲೇಷಿಸಿ ಸಂವಿಧಾನದ ಆಶಯಗಳಿಗೆ ಪೂರಕವಾಗಿ ವರದಿ ಸಲ್ಲಿಸಲಾಗಿದೆ ಎಂದು ಎಚ್.ಎನ್. ನಾಗಮೋಹನ್ ದಾಸ್ 'ಉದಯವಾಣಿ'ಗೆ ತಿಳಿಸಿದರು. ಮೀಸಲಾತಿ ಹೆಚ್ಚಳ ವಿಚಾರದಲ್ಲಿ ಇಡೀ ದೇಶದಲ್ಲೇ ಪ್ರಥಮ ಬಾರಿಗೆ ರಾಜ್ಯದಲ್ಲಿ ಆಯೋಗ ರಚನೆಯಾಗಿತ್ತು. ಅನ್ಯ ರಾಜ್ಯಗಳಲ್ಲಿ ಕೇವಲ ಆದೇಶಗಳ ಮೂಲಕ ಮೀಸಲಾತಿ ಪ್ರಮಾಣ ಹೆಚ್ಚಿಸಲಾಗಿದೆ. ಆದರೆ ಹೆಚ್ಚಳ ಬೇಕೆ, ಬೇಡವೇ ಎಂಬುದನ್ನು ತಿಳಿಯಲು ಆಯೋಗ